# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ತಾಲ್ಲೂಕು ಪಂಚಾಯತ್ ಕಟ್ಟಡಗಳ ನಿರ್ಮಾಣ ಮಾಡಲು ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ:-1) ಸರ್ಕಾರದ ಆದೇಶ ಸಂ.ಗ್ರಾಅಪ/06/ತಾಪಸ2011(ಪಿ-1)ಬೆಂಗಳೂರು, ದಿನಾಂಕ:24-07-2017.

2)ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಟಿಪ್ಪಣಿ ಸಂಖ್ಯೆ:408 ದಿನಾಂಕ:18-08-2017.

****

**ಪ್ರಸ್ತಾವನೆ:-**

2017-18ನೇ ಸಾಲಿನ ಕರ್ನಾಟಕ ರಾಜ್ಯ ಆಯವ್ಯಯದ ಲೆಕ್ಕಶೀರ್ಷಿಕೆ 2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಿಗಾಗಿ ರೂ.30.00 ಕೋಟಿಗಳನ್ನು ಒದಗಿಸಲಾಗಿದೆ. ಈ ಅನುದಾನವನ್ನು ವಿನಯೋಗಿಸಿಕೊಳ್ಳುವ ಬಗ್ಗೆ ದಿನಾಂಕ:23-05-2017 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್) ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 2017-18ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.30.00 ಕೋಟಿಗಳಲ್ಲಿ ತಾಲ್ಲೂಕು ಪಂಚಾಯತಿ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಕೋಟಿಗಳನ್ನು ರಾಜ್ಯದ 5 ತಾಲ್ಲೂಕು ಪಂಚಾಯತಿಗಳಿಗೆ (ಗದಗ, ಹಳಿಯಾಳ, ಕನಕಪುರ, ಹುಮನಾಬಾದ್ ಹಾಗೂ ಬ್ಯಾಡಗಿ) ತಲಾ ರೂ.1.00 ಕೋಟಿ (ಒಂದು ಕೋಟಿ ರೂಪಾಯಿಗಳು ಮಾತ್ರ) ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಅದರಂತೆ, 2017-18ನೇ ಸಾಲಿನ ಕರ್ನಾಟಕ ರಾಜ್ಯ ಆಯವ್ಯಯದ ಲೆಕ್ಕಶೀರ್ಷಿಕೆ 2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಿಗಾಗಿ ಒದಗಿಸಿರುವ ಅನುದಾನವನ್ನು ಹಂಚಿಕೆ ಮಾಡಲು ತಿಳಿಸಿರುವುದರಿಂದ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ.ಗ್ರಾಅಪ.11.ಗ್ರಾಮೂಸೌ.2017 ಬೆಂಗಳೂರು, ದಿನಾಂಕ:21-08-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2017-18ನೇ ಸಾಲಿನ ಕರ್ನಾಟಕ ರಾಜ್ಯ ಆಯವ್ಯಯದ ಲೆಕ್ಕಶೀರ್ಷಿಕೆ 2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಿಗಾಗಿ ರೂ.5.00 ಕೋಟಿಗಳನ್ನು ಈ ಕೆಳಕಂಡ ತಾಲ್ಲೂಕು ಪಂಚಾಯತಿಗಳಿಗೆ ಕಟ್ಟಡ ನಿರ್ಮಿಸಲು ಮಂಜೂರಾತಿ ನೀಡಿದೆ.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು ಪಂಚಾಯತಿ | ರೂ.ಕೋಟಿಗಳಲ್ಲಿ |
|---|---|---|---|
| 1 | ಗದಗ | ಗದಗ | 1.00 |
| 2 | ಉತ್ತರ ಕನ್ನಡ | ಹಳಿಯಾಳ | 1.00 |
| 3 | ರಾಮನಗರ | ಕನಕಪುರ | 1.00 |
| 4 | ಬೀದರ್ | ಹುಮನಾಬಾದ್ | 1.00 |
| 5 | ಹಾವೇರಿ | ಬ್ಯಾಡಗಿ | 1.00 |
| ಒಟ್ಟು:- ಐದು ಕೋಟಿ ರೂಪಾಯಿಗಳು ಮಾತ್ರ | | | **5.00** |

**ಷರತ್ತುಗಳು:-**

1. ಈ ಆದೇಶದಲ್ಲಿ ಅನುಮೋದಿಸಿರುವ ಕಟ್ಟಡ ಕಾಮಗಾರಿಯು ಜಿಲ್ಲಾ ಪಂಚಾಯತ್‌ನ ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ಧೃಡಪಡಿಸಿಕೊಳ್ಳತಕ್ಕದ್ದು.

2. ಸದರಿ ಕಟ್ಟಡ ಕಾಮಗಾರಿಯ ಅನುಷ್ಠಾನ ಏಜನ್ಸಿಯಾಗಿ ಕೆಆರ್‌ಐಡಿಎಲ್‌ನ್ನು ನಿಗದಿಪಡಿಸಿದೆ.
3. ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವಾಗ ಹಾಗೂ ಮುಕ್ತಾಯದ ತರುವಾಯ ಕಟ್ಟಡದ ಛಾಯಾಚಿತ್ರಗಳನ್ನು ತೆಗೆದು **"ಗಾಂಧಿ ಸಾಕ್ಷಿ ಕಾಯಕ "** ದಲ್ಲಿ ಕಡ್ಡಾಯವಾಗಿ ಅಳವಡಿಸಿದ ನಂತರವೇ ಬಿಲ್ಲುಗಳನ್ನು ಪಾವತಿಸುವುದು.
4. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಜಿಲ್ಲಾ ಪಂಚಾಯತಿಯ ಗುಣನಿಯಂತ್ರಣ ವಿಭಾಗದಿಂದ ಪರಿವೀಕ್ಷಣೆ ಮಾಡಿಸಿ ಸರ್ಕಾರಕ್ಕೆ ಕಾಲಕಾಲಕ್ಕೆ ವರದಿ ಸಲ್ಲಿಸಬೇಕು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆದೇಶ ದಿನಾಂಕ:05-04-2017ರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಷರತ್ತುಗೊಳಿಸಲಾಗಿರುವ ಅಧಿಕಾರದನ್ವಯ ಹಂಚಿಕೆ ಮಾಡಲು ಆದೇಶ ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರ ಟಿಪ್ಪಣಿ **ಸಂ.ಗ್ರಾಅಪ/408 ದಿನಾಂಕ:18-08-2017** ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು(ಗ್ರಾ.ಮೂ.ಸೌ-2) ಹಾಗೂ
ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**panchayat.build@gmail.com Ph.No.080-22343509**

ಇವರಿಗೆ:-

ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಆನಂದರಾವ್ ಸರ್ಕಲ್, ಬೆಂಗಳೂರು-560 009 ರವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:-

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ಪಿಎಂಯು)(ಐಎಫ್), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
5. ವಿಶೇಷಾಧಿಕಾರಿಗಳು(ಜಿಲ್ಲಾ ಪಂಚಾಯತ್) ಮತ್ತು ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ/ಉತ್ತರ ಕನ್ನಡ/ ರಾಮನಗರ/ಬೀದರ್ & ಹಾವೇರಿ ಜಿಲ್ಲೆಗಳಿಗೆ ಮಾಹಿತಿಗಾಗಿ.
8. ನಿರ್ದೇಶಕರು, (ಪಂ.ರಾಜ್-2), ಗ್ರಾಅಪಂರಾಜ್ ಇಲಾಖೆ, ಬೆಂಗಳೂರು
9. ಜಿಲ್ಲಾ ಖಜಾನಾಧಿಕಾರಿಗಳು, ಗದಗ/ಉತ್ತರ ಕನ್ನಡ/ರಾಮನಗರ/ಬೀದರ್ & ಹಾವೇರಿ
10. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
11. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6 (ಜಿಲ್ಲಾ ಪಂಚಾಯತ್), ಆರ್ಥಿಕ ಇಲಾಖೆ, ಬೆಂಗಳೂರು
12. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು)
13. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು